## ತಿ. ನರಸೀಪುರದ ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ

**<u>ಸಿಸಿ ಸಂಖ್ಯೆ 60/2016</u>**

CW-7/PW-**6**

| | | |
|---|---|---|
| ಹೆಸರು | : | ಎಂ. ಶಿವಣ್ಣ |
| ತಂದೆ/ಗಂಡನ ಹೆಸರು | : | ಲೇಟ್ ಮಾದಯ್ಯ |
| ವಯಸ್ಸು | : | 48 ವರ್ಷ |
| ವೃತ್ತಿ | : | ಪೊಲೀಸ್ ಇನ್ಸ್ಪೆಕ್ಟರ್ |
| ವಾಸ ಸ್ಥಳ | : | ರಾಜರಾಜೇಶ್ವರಿ ನಗರ, ಬೆಂಗಳೂರು |
| ದಿನಾಂಕ | : | **20-12-2021** |

ಸಾಕ್ಷಿಗೆ ಕ್ರಮಬದ್ಧವಾಗಿ ಪ್ರಮಾಣ ವಚನವನ್ನು ಬೋಧಿಸಲಾಯಿತು

**<u>ಮುಖ್ಯ ವಿಚಾರಣೆ ಸಹಾಯಕ ಸರ್ಕಾರಿ ಅಭಿಯೋಜಕರಿಂದಃ-</u>**

ನಾನು ಜನವರಿ 2015 ರಿಂದ ಜೂನ್ 2016 ರವರೆಗೆ ತಿ. ನರಸೀಪುರ ಠಾಣೆಯಲ್ಲಿ ಪೊಲೀಸ್ ಉಪ ನಿರೀಕ್ಷಕನಾಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿನಾಂಕ 03/08/2016 ರಂದು ಈ ಪ್ರಕರಣದ ಮುಂದುವರಿದ ತನಿಖೆಯನ್ನು ಚಾಸಾ-6 ರವರಿಂದ ಪಡೆದುಕೊಂಡಿರುತ್ತೇನೆ. ಅದೇ ದಿನ ತಿ.ನರಸೀಪುರದ ಸರ್ಕಾರಿ ಆಸ್ಪತ್ರೆಯಿಂದ ಚಾಸಾ-1 ರವರ ಗಾಯದ ಪ್ರಮಾಣಪತ್ರವನ್ನು ಪಡೆದಿರುತ್ತೇನೆ ನಂತರ ತನಿಖೆ ಪೂರ್ಣಗೊಳಿಸಿ ನ್ಯಾಯಾಲಯಕ್ಕೆ ದೋಷಾರೋಪಣ ಪಟ್ಟಿಯನ್ನು ಸಲ್ಲಿಸಿರುತ್ತೇನೆ.

ನಾನು ಸ್ವೀಕರಿಸಿದ ಗಾಯದ ಪ್ರಮಾಣಪತ್ರದ ನಿಪಿ.5 ರಲ್ಲಿದ್ದು ಅದರಲ್ಲಿರುವ ನನ್ನ ಸಹಿಯನ್ನು ನಿ.ಪಿ.5(ಬಿ) ಎಂದು ಗುರುತಿಸಲಾಯಿತು.

**ಪಾಟೀ ಸವಾಲುಃ ಆರೋಪಿತರ ಪರ ಶ್ರೀ ವಿ.ಎಸ್. ವಕೀಲರಿಂದಃ**

ಚಾಸಾ–1 ರವರು ನಮ್ಮ ಪೊಲೀಸ್ ಇಲಾಖೆಯಲ್ಲಿದ್ದರು ಎಂದರೆ ನನಗೆ ಗೊತ್ತಿಲ್ಲ. ಚಾಸಾ–1 ರವರು ಪೊಲೀಸ್ ಇಲಾಖೆಯಿಂದ ಸಸ್ಪೆಂಡ್ ಆದ ನಂತರ ಪಶುಸಂಗೋಪನಾ ಇಲಾಖೆಯಲ್ಲಿ ದ್ವಿತೀಯ ದರ್ಜೆ ಸಹಾಯಕನಾಗಿ ನಿಯುಕ್ತರಾಗಿದ್ದಾರೆ ಎಂದರೆ ಗೊತ್ತಿಲ್ಲ. ಅದೇ ರೀತಿ ಚಾಸಾ–1 ರವರುಮಾಹಿತಿ ಹಕ್ಕು ಕಾರ್ಯಕರ್ತರಿರುತ್ತಾರೆ ಎಂದರೆ ಗೊತ್ತಿಲ್ಲ. ಚಾಸಾ–1 ರವರು ಈಗ ವಕೀಲರಾಗಿ ಕೆಲಸ ಮಾಡುತ್ತಿದ್ದಾರೆ ಎಂದರೆ ನನಗೆ ಗೊತ್ತಿಲ್ಲ. ಪೊಲೀಸ್ ಇಲಾಖೆಯಲ್ಲಿದ್ದರಿಂದ ಮತ್ತು ಈಗ ಅವರು ವಕೀಲರಾಗಿರುವುದರಿಂದ ಅವರಿಗೆ ಸಹಾಯ ಮಾಡಲು ಸುಳ್ಳು ದೋಷಾರೋಪಣ ಪಟ್ಟಿ ಸಲ್ಲಿಸಿ ಈಗ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರುವಿಚಾರಣೆ ಇರುವುದಿಲ್ಲ.**

(ಸಾಕ್ಷಿದಾರರ ಹೇಳಿಕೆಯನ್ನು ಯಥಾವತ್ತಾಗಿ ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಗಣಕೀಕರಿಸಿದೆ)

(ಸಾಕ್ಷಿಗೆ ಸಾಕ್ಷ್ಯವನ್ನು ಓದಿ ಕೇಳಿ ಸರಿ ಇದೆ ಎಂದು ಒಪ್ಪಿದ್ದಾರೆ)

ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳು
ತಿ. ನರಸೀಪುರ.